**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 761 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 24.11.2018
24.11.2018

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

**ಮಾನ್ಯರೆ,**

**ವಿಷಯ:** ಬ್ಯಾಂಕಿನ ವ್ಯವಹಾರಗಳನ್ನು ನಿರ್ವಹಿಸಲು ಗ್ರಾಮ ಪಂಚಾಯತಿಗಳಲ್ಲಿ ಸ್ಥಳಾವಕಾಶ ಕಲ್ಪಿಸುವ ಬಗ್ಗೆ.

**ಉಲ್ಲೇಖ:**
1) ಸಮಸಂಖ್ಯೆಯ ಸುತ್ತೋಲೆ, ದಿನಾಂಕ 25.07.2018
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ(ಇ-ಆಡಳಿತ) ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಸಿಆಸುಇ(ಇ-ಆ) 293 ಆಮುಕಾ 2018, ದಿನಾಂಕ 05.11.2018

*****

ಸರ್ಕಾರದ ಹಲವಾರು ಯೋಜನೆಗಳಲ್ಲಿ ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ಆಧಾರ್ ಮೂಲಕ ನಗದು ಸೌಲಭ್ಯಗಳನ್ನು Direct Beneficiary Transfer(DBT) ಮೂಲಕ ವಿತರಣೆ ಮಾಡಲು ಗ್ರಾಮ ಪಂಚಾಯತಿಗಳಲ್ಲಿ Business Correspndents ಗಳನ್ನು ನೇಮಿಸಲಾಗಿದೆ. ಇವರುಗಳು ಕಾರ್ಯ ನಿರ್ವಹಿಸಲು ಅನುಕೂಲವಾಗುವಂತೆ ಗ್ರಾಮ ಪಂಚಾಯತಿ ಕಛೇರಿಗಳಲ್ಲಿ ಸ್ಥಳಾವಕಾಶವನ್ನು ಕಲ್ಪಿಸಲು ಅಗತ್ಯ ಕ್ರಮವಹಿಸಂತೆ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಉಲ್ಲೇಖ (1)ರ ಸುತ್ತೋಲೆಯಲ್ಲಿ ನಿರ್ದೇಶನ ನೀಡಲಾಗಿದೆ. ಮುಂದುವರೆದು, Business Correspndents(BC) ಗಳು ಬ್ಯಾಂಕಿಂಗ್ ಸೇವೆಗಳನ್ನು ಪರಿಣಾಮಕಾರಿಯಾಗಿ ಒದಗಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಕೆಳಕಂಡ ಕ್ರಮಗಳನ್ನು ಕೈಗೊಳ್ಳುವಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ(ಇ-ಆಡಳಿತ) ಉಲ್ಲೇಖ (2) ರಲ್ಲಿ ಕೋರಿರುತ್ತಾರೆ.

1) ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತಿ ಕಛೇರಿಗಳಲ್ಲಿ ಬಿ.ಸಿ.ಗಳಿಗೆ ಸ್ಥಳಾವಕಾಶ ಮತ್ತು ಅಂತರ್ಜಾಲ ವ್ಯವಸ್ಥೆ ಕಲ್ಪಿಸಬೇಕು.
2) ಗ್ರಾಮ ಪಂಚಾಯತಿಗೆ ಹಂಚಿಕೆಯಾದ ಬಿ.ಸಿ.ಯನ್ನು ಸಂಪರ್ಕಿಸಿ, ಗ್ರಾಂ ಪಂಚಾಯತಿ ಕಛೇರಿಯಲ್ಲಿ ಕಡ್ಡಾಯವಾಗಿ ಹಾಜರರಿಲು ಸೂಚಿಸಿ, ಖಚಿತಪಡಿಸಿಕೊಳ್ಳಬೇಕು.
3) ತದನಂತರ ಈ ಮಾಹಿತಿಯನ್ನು ನಾಮಫಲಕದಲ್ಲಿ ಅಳವಡಿಸುವುದಲ್ಲದೇ ಗ್ರಾಮ ಸಭೆ, ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಲ್ಲಿ ಮಾಹಿತಿಯನ್ನು ಜನಪ್ರತಿನಿಧಿಗಳಿಗೆ ನೀಡಬೇಕು.
4) ಸಾರ್ವಜನಿಕರಿಗೆ ಮಾಹಿತಿ ಪ್ರಚುರಪಡಿಸಲು ಗ್ರಾಮದಲ್ಲಿ ಡಂಗುರ ಸಾರುವುದರೊಂದಿಗೆ ದೃಶ್ಯ/ಶ್ರವಣ/ಮಾಧ್ಯಮ/ಪತ್ರಕಾ ಪ್ರಕಟಣೆ ನೀಡಲು ಸೂಕ್ತ ಕ್ರಮವಹಿಸಬೇಕು.
5) ಗ್ರಾಮ ಪಂಚಾಯತಿಗೆ ನಿಗಧಿಯಾದ ತಾಲ್ಲೂಕು ಅಧಿಕಾರಿಗೆ ಈ ಕುರಿತು ಪರಿಶೀಲಿಸಿ, ವರದಿ ನೀಡುವಂತೆ ಸೂಚಿಸಬೇಕು.

6) ಬಿ.ಸಿ.ಗಳು ಗೈರು ಹಾಜರಾದಲ್ಲಿ ಅಥವಾ ಸರಿಯಾಗಿ ಕಾರ್ಯನಿರ್ವಹಿಸದಿದ್ದಲ್ಲಿ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ ಲೀಡ್ ಬ್ಯಾಂಕ್ ವ್ಯವಸ್ಥಾಪಕರಿಗೆ ಮಾಹಿತಿ ನೀಡಬೇಕು.

ಮೇಲಿನಂತೆ ಅಗತ್ಯ ಕ್ರಮವಹಿಸಲು ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ, ಗ್ರಾಮೀಣ ಪ್ರದೇಶದಲ್ಲಿ ಸಾರ್ವಜನಿಕರಿಗೆ ಬ್ಯಾಂಕಿಂಗ್ ಸೇವೆಗಳನ್ನು ಪರಿಣಾಮಕಾರಿಯಾಗಿ ಒದಗಿಸಲು ಅಗತ್ಯ ಕ್ರಮವಹಿಸಲು ತಿಳಿಸಿದೆ.

24/11/18

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಯನ್ನು:**

1) ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು ಅಗತ್ಯ ಕ್ರಮಕ್ಕಾಗಿ.
2) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು ಅಗತ್ಯ ಕ್ರಮಕ್ಕಾಗಿ.
3) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4) ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
5) ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಆಸುಇ(ಇ-ಆಡಳಿತ), ಬೆಂಗಳೂರು ಇವರ ಆಪ್ತ ಕಾರ್ಯದರ್ಶಿ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.